ನಿರ್ದೇಶಕರ ಕಛೇರಿ
ಪೌರಾಡಳಿತ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080- 22867172 / 22866302
ಫ್ಯಾಕ್ಸ್: 080-22863576 / 22861665
Email: dmablr@gmail.com
Website: www.municipaladmn.gov.in
9ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು 560001.

22700, ಡಿಎಂಎ 69 ಎಂಜಿಆರ್ 2017-18 ದಿನಾಂಕ: 14.11.2017

## ಅಧಿಸೂಚನೆ

ವಿಷಯ: ರಾಜ್ಯದ ಮಹಾನಗರ ಪಾಲಿಕೆ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಶೀಘ್ರಲಿಪಿಗಾರರ ಹುದ್ದೆಯನ್ನು ನೇರನೇಮಕಾತಿ ಮೂಲಕ ಆಯ್ಕೆ ಮಾಡುವ ಕುರಿತು.

ಉಲ್ಲೇಖ: ಅಧಿಸೂಚನೆ ಸಂ: 16651 ಡಿಎಂಎ 20 ಎಂಜಿಆರ್ 2016-17, ದಿ: 26.08.2016

-----

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಅಡಿಯಲ್ಲಿ ರಾಜ್ಯದ ಮಹಾನಗರ ಪಾಲಿಕೆ (09) ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ (05) ಖಾಲಿ ಇರುವ ಒಟ್ಟು 14 ಶೀಘ್ರಲಿಪಿಗಾರರ ಹುದ್ದೆಗಳನ್ನು ನೇರನೇಮಕಾತಿ ಮೂಲಕ ಭರ್ತಿ ಮಾಡಲಾಗುತ್ತಿದ್ದು, ಈ ಎಲ್ಲಾ ಹುದ್ದೆಗಳನ್ನು ಹೈದರಾಬಾದ್-ಕರ್ನಾಟಕ ಭಾಗದ ಈ ಕೆಳಕಂಡ ಕೋಷ್ಟಕದಂತೆ ವಿವಿಧ ವರ್ಗಕ್ಕೆ ಮೀಸಲಿರಿಸಲಾಗಿದೆ. ಅರ್ಹ ಅಭ್ಯರ್ಥಿಗಳಿಂದ ನಿಗದಿಪಡಿಸಿದ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. **ಹುದ್ದೆಗಳ ಸಂಖ್ಯೆ :** ಮಹಾನಗರ ಪಾಲಿಕೆ-09

**ಹುದ್ದೆಗಳ ವರ್ಗೀಕರಣ : ಹೈದರಾಬಾದ್-ಕರ್ನಾಟಕ ವೃಂದ.**

| ಕ್ರ. ಸಂ | ವರ್ಗೀಕರಣದ ವಿವರ | ಸಾಮಾನ್ಯ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗ ವಿಕಲ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋ. ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|
| 1 | ಪ.ಜಾತಿ | 01 | - | 01 | - | - | - | - | **02** |
| 2 | ಪ.ಪಂಗಡ | - | - | - | - | - | - | - | - |
| 3 | ಪ್ರವರ್ಗ-1 | - | - | - | - | - | - | - | - |
| 4 | ಪ್ರವರ್ಗ-2ಎ | - | 01 | - | - | - | - | - | **01** |
| 5 | ಪ್ರವರ್ಗ-2ಬಿ | - | - | - | - | - | - | - | - |
| 6 | ಪ್ರವರ್ಗ-3ಎ | 01 | - | - | - | - | - | - | **01** |
| 7 | ಪ್ರವರ್ಗ-3ಬಿ | 01 | - | - | - | - | - | - | **01** |
| 8 | ಸಾಮಾನ್ಯ | 02 | 02 | - | - | - | - | - | **04** |
| | ಒಟ್ಟು | **05** | **03** | **01** | - | - | - | - | **09** |

2. ಹುದ್ದೆಗಳ ಸಂಖ್ಯೆ : ನಗರ ಸ್ಥಳೀಯ ಸಂಸ್ಥೆಗಳು-05

ಹುದ್ದೆಗಳ ವರ್ಗೀಕರಣ : ಹೈದರಾಬಾದ್-ಕರ್ನಾಟಕ ವೃಂದ.

| ಕ್ರ. ಸಂ | ವರ್ಗೀಕರಣದ ವಿವರ | ಸಾಮಾನ್ಯಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣಅಭ್ಯರ್ಥಿ | ಅಂಗ ವಿಕಲ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋ. ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|
| 1 | ಪ.ಜಾತಿ | 01 | 01 | - | - | - | - | - | **02** |
| 2 | ಪ.ಪಂಗಡ | - | - | - | - | - | - | - | - |
| 3 | ಪ್ರವರ್ಗ-1 | - | - | - | - | - | - | - | - |
| 4 | ಪ್ರವರ್ಗ-2ಎ | - | - | - | - | - | - | - | - |
| 5 | ಪ್ರವರ್ಗ-2ಬಿ | - | - | - | - | - | - | - | - |
| 6 | ಪ್ರವರ್ಗ-3ಎ | - | - | - | - | - | - | - | - |
| 7 | ಪ್ರವರ್ಗ-3ಬಿ | - | - | - | - | - | - | - | - |
| 8 | ಸಾಮಾನ್ಯ | - | - | 02 | 01 | - | - | - | **03** |
| | ಒಟ್ಟು | **01** | **01** | **02** | **01** | - | - | - | **05** |

3. <u>ವೇತನ ಶ್ರೇಣಿ :</u>ರೂ. 14550-26700

4. <u>ಶೈಕ್ಷಣಿಕ ವಿದ್ಯಾರ್ಹತೆ :</u>

- ಸರ್ಕಾರದ ಮಾನ್ಯತೆ ಪಡೆದ ವಿಶ್ವವಿದ್ಯಾನಿಲಯದಿಂದ ಪದವಿ ಪಡೆದಿರಬೇಕು.
- ಕಮರ್ಷಿಯಲ್ ಪ್ರಾಕ್ಟೀಸ್/ಸೆಕ್ರೆಟೇರಿಯಲ್ ಪ್ರಾಕ್ಟೀಸ್‌ನಲ್ಲಿ ಡಿಪ್ಲೊಮಾ ಹೊಂದಿರಬೇಕು.
- ಗಣಕಯಂತ್ರದ ಸಾಮಾನ್ಯ / ಮೂಲಜ್ಞಾನ ಇರುವವರಿಗೆ ಆದ್ಯತೆ ನೀಡಲಾಗುವುದು.

5. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ದಿನಾಂಕ:

| ವಿವರ | ದಿನಾಂಕ | ವೆಬ್‌ಸೈಟ್ ವಿಳಾಸ |
|---|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕ | 15.11.2017 | www.municipaladmn.gov.in |
| ಅಭ್ಯರ್ಥಿಗಳು ಅರ್ಜಿ ಸಲ್ಲಿಸಲುಕೊನೆಯ ದಿನಾಂಕ | 18.12.2017 ಸಂಜೆ 5.30 | |

6. ಅರ್ಜಿ ಶುಲ್ಕ :

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ,ಪ್ರವರ್ಗ-1 | ರೂ.250/- |
| ಸಾಮಾನ್ಯ ವರ್ಗ, 2ಎ, 2ಬಿ, 3ಎ, 3ಬಿ ವರ್ಗಕ್ಕೆ | ರೂ.500/- |

ಅರ್ಜಿ ಶುಲ್ಕವನ್ನು ಡಿಮ್ಯಾಂಡ್ ಡ್ರಾಫ್ಟ್ (ಡಿ.ಡಿ.) ಮೂಲಕವೇ ಸಲ್ಲಿಸಬೇಕು. ಡಿ.ಡಿ.ಯನ್ನು'Director, Directorate of Municipal Administration, Bangalore' ಇವರ ಹೆಸರಿಗೆ ಪಡೆದು ಸಲ್ಲಿಸತಕ್ಕದ್ದು.

7. ಆನ್‌ಲೈನ್ ಮುಖಾಂತರಅರ್ಜಿ ಪಡೆದು ಸಲ್ಲಿಸುವ ವಿದಾನ:

- ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್‌ಸೈಟ್-<u>www.municipaladmn.gov.in</u> ತೆರೆದುಕಂಪ್ಯೂಟರ್ ಪರದೆಯ ಮೇಲೆ ಕಾಣಿಸುವ Application for Stenographer Recruitment in DMA ಎಂಬ ಫಾರ್ಮ್‌ನ್ನು ಕ್ಲಿಕ್ ಮಾಡಿದ ನಂತರಅರ್ಜಿ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ.

- ಅರ್ಜಿಯ ಶುದ್ಧಪ್ರತಿ (Hard Copy) ಪಡೆದು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಉಳಿತಾಯ ಖಾತೆ ಸಂ:64204977830, ಸ್ಟೇಟ್ ಬ್ಯಾಂಕ್ಆಫ್ ಮೈಸೂರು ಇಲ್ಲಿಗೆ ನಿಗದಿತ ಶುಲ್ಕ ಪಾವತಿಸಿ, ಅರ್ಜಿಯೊಂದಿಗೆ ಚಲನ್ ಪ್ರತಿಯನ್ನು ಲಗತ್ತಿಸಿ ಸಲ್ಲಿಸಬೇಕು. ಬ್ಯಾಂಕಿನಲ್ಲಿ ನಿಗದಿತಅರ್ಜಿ ಶುಲ್ಕ ಪಾವತಿಸಲು ಕಡೆಯ ದಿನಾಂಕ: 18.12.2017 ಆಗಿರುತ್ತದೆ.
- ಡಿ.ಡಿ.ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸುವುದಿಲ್ಲ. ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಇತರೆ ಯಾವುದೇ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.
- ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ಕಾಯದೆ ಮುಂಚಿತವಾಗಿಯೇ ಅರ್ಜಿಗಳನ್ನು ಸಲ್ಲಿಸತಕ್ಕದ್ದು.
- ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, 9ನೇ ಮಹಡಿ, ವಿ.ವಿ.ಗೋಪುರ, ಡಾ॥ ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು-560001 ಕಛೇರಿಗೆ ಖುದ್ದು ಭೇಟಿ ನೀಡಿ ಅಥವಾ ಅಂಚೆ ಮೂಲಕ ನಿಗದಿತ ಕಡೆಯ ದಿನಾಂಕದೊಳಗಾಗಿ ಸಲ್ಲಿಸಲಾದ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು. ಇನ್ನಾವುದೇ ಮೂಲಗಳಿಂದ ಕಳುಹಿಸಲ್ಪಟ್ಟ/ಸಲ್ಲಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

8. **ಅರ್ಹತಾ ಷರತ್ತುಗಳು :**

- ಅರ್ಜಿದಾರರು ಭಾರತೀಯ ನಾಗರೀಕರಾಗಿರತಕ್ಕದ್ದು.
- ಅಭ್ಯರ್ಥಿಯು ಮಾನಸಿಕವಾಗಿ ಮತು ್ತದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕಗಳನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ/ಮಾನಸಿಕ ನ್ಯೂನತೆಯಿಂದ ಮುಕ್ತವಾಗಿರತಕ್ಕದ್ದು.
- ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅರ್ಜಿಯನ್ನು ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಪ್ರಾಧಿಕಾರ ಕಾಯ್ದಿರಿಕೊಂಡಿದೆ.
- ನಿಗದಿತ ಶೈಕ್ಷಣಿಕ ಅರ್ಹತೆ ಜೊತೆಗೆ ಮೇಲ್ಕಂಡ ಅರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿಯನ್ನು ಸಲ್ಲಿಸಲು ಅರ್ಹರಾಗಿರುತ್ತಾರೆ.

9. **ವಯೋಮಿತಿ :**

ಈ ಪ್ರಕಟಣೆಯ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು ಕನಿಷ್ಠ 18 ವರ್ಷ ಪೂರ್ಣಗೊಂಡಿರಬೇಕು ಮತ್ತು ಅರ್ಜಿಗಳನ್ನು ಶುಲ್ಕದೊಂದಿಗೆ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಈ ಕೆಳಗಿನ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| ವರ್ಗ | ಕನಿಷ್ಠ | ಗರಿಷ್ಠ |
|---|---|---|
| ಸಾಮಾನ್ಯ ವರ್ಗ | 18 ವರ್ಷ | 35 ವರ್ಷ |
| ಪ್ರವರ್ಗ 2ಎ, 2ಬಿ, 3ಎ, 3ಬಿ | 18 ವರ್ಷ | 38 ವರ್ಷ |
| ಪ.ಜಾತಿ/ಪ.ಪಂಗಡ/ಪ್ರವರ್ಗ-1 | 18 ವರ್ಷ | 40 ವರ್ಷ |

ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುವುದು. ಇತರೆಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

10. ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ಸಂಬಂಧಿಸಿದ ಪ್ರಮಾಣ ಪತ್ರ :

ಅಭ್ಯರ್ಥಿಗಳು ಹೈದರಾಬಾದ್-ಕರ್ನಾಟಕ ಪ್ರದೇಶದ ಸಾಮಾನ್ಯ ಉದ್ಯೋಗ ಮೀಸಲಾತಿಯಡಿಯಲ್ಲಿ ಸಂಬಂಧಿಸಿದ ಪ್ರಾಧಿಕಾರದಿಂದ ಪಡೆದ ಸ್ಥಳೀಯ ಅಭ್ಯರ್ಥಿ ಪತ್ರವನ್ನುಅನುಬಂಧ-ಎ ರೀತ್ಯಾ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

11. ಜಾತಿ ಮತ್ತು ಮೀಸಲಾತಿ ಪ್ರಮಾಣ ಪತ್ರಗಳು :

ಜಾತಿ ಮೀಸಲಾತಿ ಕೋರ ಬಯಸುವವರು ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರವನ್ನು ಸಲ್ಲಿತಕ್ಕದ್ದು.

12. ಆಯ್ಕೆ ವಿಧಾನ :

- ಕನ್ನಡ ಭಾಷೆಯಲ್ಲಿ ಶೀಘ್ರಲಿಪಿ ಉಕ್ತಲೇಖನ ಪಡೆದು ಗಣಕಯಂತ್ರದಲ್ಲಿ ನುಡಿ ತಂತ್ರಾಂಶದ ಮೂಲಕ ಬೆರಳಚ್ಚು ಮಾಡುವುದು.
- ಆಂಗ್ಲ ಭಾಷೆಯಲ್ಲಿ ಶೀಘ್ರಲಿಪಿ ಉಕ್ತಲೇಖನ ಪಡೆದು ಗಣಕಯಂತ್ರದಲ್ಲಿ ಬೆರಳಚ್ಚು ಮಾಡುವುದು.

- **Direct Typing Test – 10 minutes each**

**English**

- 30 words per minute. Total no. of mistakes divided by 2 will be deducted from 100 marks

**Kannada**

- 35 words per minute. Total no. of mistakes divided by 2 will be deducted from 100 marks

- **Shorthand Test – 10 minutes each**

**English**

- 45 words per minute. Total no. of mistakes divided by 2 will be deducted from 100 marks

**Kannada**

- 45 words per minute. Total no. of mistakes divided by 2 will be deducted from 100 marks

- ಯಾವುದಾದರೂ ಎರಡು ವಿಷಯದ ಬಗ್ಗೆ ಕನ್ನಡದಲ್ಲಿ ಪ್ರಬಂಧ

  **Essay** - 500 words in Kannada in half an hour – 50 marks

- ಸಾಮಾನ್ಯ ಗಣಿತದ ಬಗ್ಗೆ ಕೆಲವು ಪ್ರಶ್ನೆಗಳು

  **Mathematics Problem** – 10 problems in half an hour - 50 mark

- ಆಯಾಯ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು.
- ಮೇಲ್ಕಂಡ ವಿಷಯಗಳ ಕಿರುಪರೀಕ್ಷೆಗಳಲ್ಲಿ 50% ಗಿಂತ ಹೆಚ್ಚು ಅಂಕಗಳಿಸಿದ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು.
- ಗಣಕಯಂತ್ರದ ಸಾಮಾನ್ಯ / ಮೂಲ ಜ್ಞಾನ ಇರುವವರಿಗೆ ಆದ್ಯತೆ ನೀಡಲಾಗುವುದು.

R -8

- **ಸಾಮಾನ್ಯ ಸೂಚನೆಗಳು :**

- ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಸಂದರ್ಭಾನುಸಾರ ಹೊಂದಿರಬೇಕಾಗುತ್ತದೆ.

1) ಎಸ್.ಎಸ್.ಎಲ್.ಸಿ. ಪರೀಕ್ಷೆಯ ಅಂಕಪಟ್ಟಿ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆ ನಡೆಸುವಆಂಗ್ಲ ಮತ್ತುಕನ್ನಡ ಭಾಷೆಗಳ ಹಿರಿಯ ಶ್ರೇಣಿಯ ಶೀಘ್ರಲಿಪಿ ಮತ್ತು ಆಂಗ್ಲ ಮತ್ತು ಕನ್ನಡ ಭಾಷೆಗಳ ಹಿರಿಯ ಶ್ರೇಣಿಯ ಬೆರಳಚ್ಚು ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿರುವ ಅಧಿಕೃತ ಪ್ರಮಾಣ ಪತ್ರಗಳು
2) ಹುಟ್ಟಿದ ದಿನಾಂಕದ ಪ್ರಮಾಣ ಪತ್ರ (ಎಸ್.ಎಸ್.ಎಲ್.ಸಿ. ಅಂಕಪಟ್ಟಿ)
3) ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರ
4) ಹೈದರಾಬಾದ್-ಕರ್ನಾಟಕ ಪ್ರದೇಶದ ಸಾಮಾನ್ಯ ಉದ್ಯೋಗ ಮೀಸಲಾತಿಯಡಿಯಲ್ಲಿ ಸಂಬಂಧಿಸಿದ ಪ್ರಾಧಿಕಾರದಿಂದ ಪಡೆದ ಸ್ಥಳೀಯ ಅಭ್ಯರ್ಥಿ ಪತ್ರ

- ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಅಂತಹವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
- ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿಕೊಡಲಾಗುವುದು. ನಂತರ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
- ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನಆನ್‌ಲೈನ್ ಮುಖಾಂತರ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ಸೂಚನೆಗಳನ್ನು ಪಾಲಿಸಬೇಕು.
- ಒಮ್ಮೆಆಯ್ಕೆಯಾದ ಅಭ್ಯರ್ಥಿಗಳು ಕನಿಷ್ಠ 5 ವರ್ಷಗಳವರೆಗೆ ಕಡ್ಡಾಯವಾಗಿ ಸೇವೆಯಲ್ಲಿರತಕ್ಕದ್ದು. ತಪ್ಪಿದಲ್ಲಿರೂ. 1,00,000/-ಗಳನ್ನು ಸರ್ಕಾರಕ್ಕೆ ಪಾವತಿಸಲು ಬದ್ಧರಾಗಿರತಕ್ಕದ್ದು.
- ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

R. [signature] 14/11/2017

ನಿರ್ದೇಶಕರು,
ಪೌರಾಡಳಿತ ನಿರ್ದೇಶನಾಲಯ,
ಬೆಂಗಳೂರು.

[signature] 14/11